RNU AIR DHARWAD

## MAY 26,2025
## ALL INDIA RADIO- DHARWAD
## PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯಶಾಸ್ತ್ರ ಅಧ್ಯಯನಕ್ಕೆ, ಪ್ರತ್ಯೇಕ ಮಹಾವಿದ್ಯಾಲಯ ಸ್ಥಾಪಿಸುವ ಚಿಂತನೆ ರಾಜ್ಯ ಸರ್ಕಾರ ಹೊಂದಿದೆ. ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ, ನಿರ್ಧರಿಸುವುದಾಗಿ, ವಿಧಾನಪರಿ ಿತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ರಾಜ್ಯ ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ, ವಿಧಾನಸೌಧ ಪ್ರವಾಸಕ್ಕೆ ಅವರು ಚಾಲನೆ ನೀಡಿ, ಮಾತನಾಡಿದರು. ಪ್ರವಾಸೋದ್ಯಮ ಖಾತೆ ಸಚಿವ, ಎಚ್.ಕೆ.ಪಾಟೀಲ ಮಾತನಾಡಿ, ವಿಧಾನಸೌಧ ಪ್ರವಾಸ, ಜ್ಞಾನ ದಾಸೋಹ. ಪ್ರಜಾಪ್ರಭುತ್ವವನ್ನು ಸುದೃಢಗೊಳಿಸುವ ಛಲ ಬರಲಿ ಎಂಬ ಉದ್ದೇಶದಿಂದ, ಏರ್ಪಡಿಸಿರುವುದಾಗಿ ಹೇಳಿದರು. ತಲಾ 50 ರೂಪಾಯಿ ಪ್ರವೇಶ ಶುಲ್ಕವಿದ್ದು, ವಿಧಾನಸೌಧದ 3ನೇ ದ್ವಾರದಿಂದ, ಪ್ರವೇಶ ಕಲ್ಪಿಸಲಾಗಿದೆ. ಒಂದೂವರೆ ಕಿಲೋ ಮೀಟರ್ ನಡಿಗೆ ಮೂಲಕ, ಪ್ರವಾಸ ಮಾರ್ಗದರ್ಶಿಗಳೊಂದಿಗೆ, ವೀಕ್ಷಿಸಬಹುದಾಗಿದೆ.**

<><><>

**ರಾಜ್ಯದ ಕರಾವಳಿಗೆ ಮುಂಗಾರು ಪ್ರವೇಶಿಸಿರುವ ಹಿನ್ನೆಲೆಯಲ್ಲಿ, ಕರಾವಳಿ–ಮಲೆನಾಡು ಭಾಗದ ಆರು ಜಿಲ್ಲೆಗಳಲ್ಲಿ ಇಂದು ರೆಡ್ ಅಲರ್ಟ್ ಘೋಷಿಸಲಾಗಿದೆ. ಉತ್ತರ ಕನ್ನಡ ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗಬಹುದಾದ ಪ್ರದೇಶಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಮುಂಜಾಗ್ರತೆ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ....**

<><><>

**ಧ್ವನಿ: ಲಕ್ಷ್ಮೀಪ್ರಿಯಾ 37 ಸೆಕೆಂದುಗಳು**

<><><>

**ಕೊಡಗು ಜಿಲ್ಲೆಯಾದ್ಯಂತ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆ ಇಂದು ಅಂಗನವಾಡಿ ಹಾಗೂ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಕಳೆದ ಮೂರು ದಿನಗಳಿಂದ ಮಡಿಕೇರಿ, ತಲಕಾವೇರಿ, ಭಾಗಮಂಡಲ ಸೇರಿದಂತೆ ಜಿಲ್ಲೆಯ ಪ್ರಮುಖ ಪಟ್ಟಣಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ಜನಜೀವನ ವ್ಯತ್ಯಯವಾಗಿದೆ.**

<><><>

**ರಾಜ್ಯ ವಿಧಾನಸಭೆ, ವಿರೋಧ ಪಕ್ಷ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ, ಡಾಕ್ಟರ್ ಸಿ.ಎನ್ ಅಶ್ವತ್ಥ ನಾರಾಯಣ ಸೇರಿದಂತೆ ಒಟ್ಟು 18 ಜನ ಬಿಜೆಪಿ ಶಾಸಕರ ಅಮಾನತು ಮಾಡಿ ನೀಡಲಾಗಿದ್ದ ಆದೇಶವನ್ನು ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಅವರು ಹಿಂಪಡೆದಿದ್ದಾರೆ. ವಿಧಾನಸೌಧದಲ್ಲಿ ಜರುಗಿದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ**

ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ ಪಾಟೀಲ, ವಿರೋಧ ಪಕ್ಷದ ನಾಯಕ ಆರ್. ಅಶೋಕ ಭಾಗವಹಿಸಿದ್ದರು. ಸಭೆಯ ಬಳಿಕ ಸಭಾಪತಿಯವರು ಅಮಾನತು ರದ್ದತಿಯ ನಿರ್ಣಯ ಪ್ರಕಟಿಸಿದರು.

<><><>

ಯಾದಗಿರಿ ಜಿಲ್ಲೆ, ಶಹಾಪುರ ನಗರದ ಹೊಸ ಬಸ್ ನಿಲ್ದಾಣದ ಹತ್ತಿರ, 87 ಲಕ್ಷ ರೂಪಾಯಿ ವೆಚ್ಚದಲ್ಲಿ, ಇಂದಿರಾ ಕ್ಯಾಂಟೀನ್ ನಿರ್ಮಾಣಗೊಂಡಿದೆ. ಜೂನ್ 5 ರಂದು, ಇಂದಿರಾ ಕ್ಯಾಂಟೀನ್ ಉದ್ಘಾಟಿಸುವ ನಿರೀಕ್ಷೆ ಇದೆ ಎಂದು, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವ, ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಹಸಿದ ಹೊಟ್ಟೆಗೆ, ಬಡ ಜನತೆಗೆ ಆಸರೆಯಾಗಲಿದೆ. ಉಪಾಹಾರಕ್ಕೆ 5 ರೂಪಾಯಿ ಹಾಗೂ ಊಟಕ್ಕೆ 10 ರೂಪಾಯಿ ನಿಗದಿಪಡಿಸಲಾಗಿದೆ. ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿದೆ ಎಂದರು.

<><><>

ಇಂದು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆ ಆರಂಭಗೊಂಡಿದೆ. ಸಭೆಯ ನಂತರ, ಮಧ್ಯಾಹ್ನ 1 ಗಂಟೆ 30 ನಿಮಿಷಕ್ಕೆ ಸಮಿತಿ ಅಧ್ಯಕ್ಷರು, ಸುದ್ದಿಗೋಷ್ಠಿ ನಡೆಸಿ, ಸಭೆಯ ಮಾಹಿತಿ ನೀಡಲಿದ್ದಾರೆ.

<><><>

ಪ್ರಧಾನಮಂತ್ರಿ ಅಧ್ಯಕ್ಷತೆಯ, ಕೇಂದ್ರದ ನೀತಿ ಆಯೋಗದ ಸಭೆಗೆ, ರಾಜ್ಯದ ಮುಖ್ಯಮಂತ್ರಿ ಗೈರಾಗಿ, ರಾಜ್ಯದ ಜನತೆಗೆ ಅನ್ಯಾಯವೆಸಗಿದಂತಾಗಿದೆ ಎಂದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಟೀಕಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯವರು ಸಭೆಯಲ್ಲಿ ಭಾಗವಹಿಸಿ, ಸಮಾಲೋಚಿಸಿ, ರಾಜ್ಯದ ಪಾಲಿನ ಹಕ್ಕನ್ನು ಪಡೆಯಬಹುದಿತ್ತು. ಕೇಂದ್ರದ ನಿಲುವಿನ ವಿರುದ್ಧ ಧೋರಣೆ ತಾಳಿ, ಕೇಂದ್ರ ಅನುದಾನ ನೀಡುತ್ತಿಲ್ಲ ಎಂದು, ಆರೋಪಿಸುವುದು ಸಲ್ಲ ಎಂದರು.

<><><>

ಕೋಲಾರ ಜಿಲ್ಲೆಯಲ್ಲಿ ಅರಿವು ಭಾರತ ಮೂಲಕ ಸಮಾನತೆಯ ಬಗ್ಗೆ ಜಾಗ್ರತಿ ಮೂಡಿಸಿ, ತರಲಾಗುತ್ತಿರುವ ಸಾಮಾಜಿಕ ಬದಲಾವಣೆಯ ಕಾರ್ಯವು ರಾಜ್ಯ ಹಾಗೂ ದೇಶಕ್ಕೆ ಮಾದರಿಯಾಗಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎಂ.ಆರ್ ರವಿ ಹೇಳಿದರು. ಮುಳಬಾಗಿಲು ತಾಲೂಕಿನ ಹನುಮನಹಳ್ಳಿಯಲ್ಲಿ ಸಹಭೋಜನ ಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಅಸ್ಪೃಶ್ಯತೆ ಹೋಗಲಾಡಿಸಿ, ಸಮಾನ ಹಕ್ಕುಗಳ ಬಗ್ಗೆ ಜಾಗ್ರತಿ ಮೂಡಿಸುವಲ್ಲಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಪಾತ್ರ ಮಹತ್ತರವಾಗಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>